JULY 21, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಇ–ಸ್ವತ್ತು ದಾಖಲೀಕರಣಕ್ಕೆ, ರಾಜ್ಯ ಸರ್ಕಾರ ಒತ್ತು ನೀಡಿದೆ; ರಾಜ್ಯಾದ್ಯಂತ 1 ಕೋಟಿ 11 ಲಕ್ಷದ 11 ಸಾವಿರ ಇ–ಸ್ವತ್ತು ನೀಡಲಾಗುತ್ತಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆಯಲ್ಲಿ, ವಿವಿಧ ಯೋಜನೆಗಳ ಫಲಾನುಭವಿಗಳಿಗೆ, ಸೌಲಭ್ಯ ವಿತರಿಸಿ, ಮಾತನಾಡಿದರು. ಕೃಷಿಗೆ ಅನುಕೂಲ ಕಲ್ಪಿಸಲು, 19 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ, 10 ಹೆಚ್.ಪಿ. ವರೆಗೆ ವಿದ್ಯುತ್ ಅನ್ನು, ನಿತ್ಯ 7 ಗಂಟೆ, ರೈತರ ಹೊಲಗಳಿಗೆ ನೀಡಲಾಗುತ್ತಿದೆ ಎಂದರು. ಗ್ರಾಮೀಣಾಭಿವೃದ್ಧಿ ಖಾತೆ ಸಚಿವ, ಪ್ರಿಯಾಂಕ ಖರ್ಗೆ ಮಾತನಾಡಿ, ಹೊಸಕೋಟೆಯನ್ನು, ರಾಜ್ಯದ ಮೊದಲ ಮಾದರಿ ತಾಲೂಕು ಪಂಚಾಯಿತಿಯಾಗಿ ರೂಪಿಸಲಾಗುವುದು; ನರೇಗಾ ಯೋಜನೆ ಅಡಿ, 13 ಕೋಟಿ ಮಾನವ ದಿನಗಳನ್ನು ಸೃಜಿಸಿ, ಕೂಸಿನ ಮನೆಗಳಲ್ಲಿ, 50 ಸಾವಿರ ಮಕ್ಕಳಿಗೆ ಆಸರೆ ಕಲ್ಪಿಸಲಾಗಿದೆ ಎಂದರು.**

<><><>

**ಕೇಂದ್ರ ಸ್ವಾಮ್ಯದ, ಮಂಗಳೂರು ರಿಫೈನರಿ ಮತ್ತು ಪೆಟ್ರೋಕೆಮಿಕಲ್ಸ್ ಲಿಮಿಟೆಡ್ – ಎಂ.ಆರ್.ಪಿ.ಎಲ್ ಹಸಿರು ವಲಯ ನಿರ್ಮಿಸಲು, 27 ಎಕರೆ ಭೂ ಸ್ವಾಧೀನಕ್ಕೆ ಮುಂದಾಗಿದ್ದು, ನಿರ್ವಸಿತರಿಗೆ ಸೂಕ್ತ ಪರಿಹಾರ ಒದಗಿಸಲು, ನಿರ್ಧರಿಸಲಾಗಿದೆ. ದಕ್ಷಿಣಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ, ಸಂಸದ ಬ್ರಿಜೇಶ್ ಚೌಟ ಅಧ್ಯಕ್ಷತೆಯಲ್ಲಿ ಸಭೆ, ನಡೆಯಿತು. ಪ್ರತಿ ಎಕರೆಗೆ 80 ಲಕ್ಷ ರೂಪಾಯಿ ಪರಿಹಾರ, ಉದ್ಯೋಗಕ್ಕೆ ಬದಲಾಗಿ, ಪ್ರತಿ ಕುಟುಂಬಕ್ಕೆ 20 ಲಕ್ಷ ರೂಪಾಯಿ ನಗದು ಮತ್ತು ನಿವೇಶನ ಸೇರಿದಂತೆ, ಪರಿಹಾರ ನೀಡುವುದಾಗಿ, ಎಂ.ಆರ್.ಪಿ.ಎಲ್ ಜಿಲ್ಲಾಡಳಿತಕ್ಕೆ ಪ್ರಸ್ತಾವ ಸಲ್ಲಿಸಿದೆ.**

<><><>

**ಆತ್ಮನಿರ್ಭರ ಭಾರತ ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ಯಮಗಳ ನಿಯಮಬದ್ಧಗೊಳಿಸುವಿಕೆ–ಪಿ.ಎಂ.ಎಫ್.ಎಂ.ಇ ಯೋಜನೆ ಫಲಾನುಭವಿ, ಧಾರವಾಡ ಜಿಲ್ಲೆ ಗೋನಕೊಪ್ಪದ ಆರಿಫ್ ದಾವಣಗೆರಿ ಅವರು ಪಾಫ್ಡ್ ರೈಸ್– ಚರುಮುರಿ ತಯಾರಿಕೆ ಉದ್ಯಮ ಆರಂಭಿಸಿ ಯಶಸ್ವಿಯಾಗಿದ್ದಾರೆ. ಯೋಜನೆಯ ಮೂಲಕ ಸೌರ ವಿದ್ಯುತ್ ಯಂತ್ರೋಪಕರಣಗಳನ್ನು ಅಳವಡಿಸಿಕೊಂಡಿರುವ ಅವರು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ಹಂಚಿಕೊಂಡಿದ್ದಾರೆ.**

<><><>

**ಧ್ವನಿ: ಆರಿಫ್ ದಾವಣಗೆರಿ 36 ಸೆಕೆಂದುಗಳು**

<><><>

'ಮನೆ ಮನೆಗೆ ಪೊಲೀಸ್' ಎಂಬುದು, ಸಮುದಾಯ ಸ್ನೇಹಿ ಪೊಲೀಸ್ ವ್ಯವಸ್ಥೆ. 'ಕಮ್ಯುನಿಟಿ ಪೊಲೀಸ್' ಸಾರ್ವಜನಿಕರಲ್ಲಿ ವಿಶ್ವಾಸ ಮೂಡಿಸುವ, ಸೇತುವೆ ಎಂದು, ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಗುಂಜನ್ ಆರ್ಯ ಹೇಳಿದ್ದಾರೆ. ಧಾರವಾಡ ತಾಲೂಕಿನ ಹೆಬ್ಬಳ್ಳಿ ಗ್ರಾಮದಲ್ಲಿ, ಮನೆ ಮನೆಗೆ ಭೇಟಿ ನೀಡಿ, ಗ್ರಾಮಸ್ಥರ ಅಹವಾಲು ಆಲಿಸಿದರು. ಪ್ರತಿಕ್ರಿಯೆ ಸೇವೆಯನ್ನು ಮಾತ್ರವೇ ಈ ವರೆಗೆ ಒದಗಿಸುತ್ತ ಬಂದ ಪೊಲೀಸ್ ಇಲಾಖೆ, ಇನ್ನು ಮುಂದೆ ಸಕ್ರಿಯ ಸೇವೆ ಒದಗಿಸುವತ್ತ ಪರಿವರ್ತನೆಯ ಹೆಜ್ಜೆ ಇರಿಸಿದೆ, ಎಂದರು.

<><><>

ಡಿಜಿಟಲ್ ಯುಗದಲ್ಲಿ ಪ್ರಾದೇಶಿಕ ಭಾಷೆಗಳಿಗೆ ಕಂಟಕ ಎದುರಾಗಿದ್ದು, ಇಂತಹ ಸಂದಿಗ್ಧ ಕಾಲಘಟ್ಟದಲ್ಲಿ ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘವು ಕನ್ನಡ ಭಾಷೆ, ಸಂಸ್ಕೃತಿ ಆಧಾರಸ್ತಂಭವಾಗಿ ನಿಂತಿದೆ ಎಂದು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ವಿಜಯಾ ಕೋರಿಶೆಟ್ಟಿ ಹೇಳಿದರು. ಧಾರವಾಡ ನಗರದ ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ, ಕರ್ನಾಟಕ ವಿದ್ಯಾವರ್ಧಕ ಸಂಘದ 136 ನೇ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು. ಹಾವೇರಿಯ ಗೆಳೆಯರ ಬಳಗದ ಅಧ್ಯಕ್ಷ ಡಾಕ್ಟರ ಸುದೀಪ ಪಂಡಿತ ಅವರಿಗೆ 'ಸಿರಿಗನ್ನಡಂ ಗೆಲ್ಗೆ ಶ್ರೀ ರಾ.ಹ ದೇಶಪಾಂಡೆ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

<><><>

ವಿಜಯಪುರ ಜಿಲ್ಲೆಯ ಬೂದಿಹಾಳ – ಪೀರಾಪುರ ಏತ ನೀರಾವರಿ ಯೋಜನೆ ಕಾಮಗಾರಿ ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಖಾತೆ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ. ಬಿ. ಪಾಟೀಲ ಹೇಳಿದ್ದಾರೆ. ರೈತರ ಹಿತರಕ್ಷಣೆ ಸರ್ಕಾರದ ಆದ್ಯತೆಯಾಗಿದೆ, ಮುಂದಿನ 9 ತಿಂಗಳಲ್ಲಿ ಕಾಲುವೆ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದರು. ಸಚಿವರ ಭರವಸೆ ಹಿನ್ನೆಲೆ, ತಾಳಿಕೋಟೆ ತಾಲೂಕು ಕೊಡಗಾನೂರ ಬಳಿ ರೈತರು ನಡೆಸುತ್ತಿದ್ದ ಅನಿರ್ಧಿಷ್ಠಾವಧಿ ಧರಣಿ ಸತ್ಯಾಗ್ರಹವನ್ನು ಹಿಂಪಡೆದಿದ್ದಾರೆ.

<><><>

ಉತ್ತರ ಕನ್ನಡ ಜಿಲ್ಲೆ, ಅಂಕೋಲಾ ತಾಲೂಕು, ಅಗಸೂರು ಸಮೀಪ ಮಂಗಳೂರು ಕಡೆಗೆ ಸಂಚರಿಸುತ್ತಿದ್ದ, ಖಾಸಗಿ ಬಸ್ ಚಾಲಕನ ನಿಯಂತ್ರಣ ತಪ್ಪಿ, ಕಿರು ಸೇತುವೆಗೆ ಡಿಕ್ಕಿ ಹೊಡೆದು ಹಳ್ಳಕ್ಕೆ ಉರುಳಿದ ಪರಿಣಾಮ, ಓರ್ವರು ಮೃತಪಟ್ಟಿದ್ದು, ಐವರು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡ ದುರ್ಘಟನೆ ಸಂಭವಿಸಿದೆ, ಗಂಭೀರ ಗಾಯಗೊಂಡ ಐವರನ್ನು ಮಂಗಳೂರು ನಗರದ ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

<><><>

ಇಂದು ಖ್ಯಾತ ಹಿಂದೂಸ್ಥಾನಿ ಗಾಯಕಿ, ಪದ್ಮವಿಭೂಷಣ ಡಾಕ್ಟರ ಗಂಗೂಬಾಯಿ ಹಾನಗಲ್ ಅವರ ಪುಣ್ಯಸ್ಮರಣೆಯ ದಿನ. ಸಾಮಾಜಿಕ ಜಾಲತಾಣದಲ್ಲಿ, ಅವರ ಕೊಡುಗೆಗಳನ್ನು ಸ್ಮರಿಸಿರುವ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಸಂಗೀತ ಸಾಮ್ರಾಜ್ಞೆಗೆ ಗೌರವಪೂರ್ವಕ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>